FA/8 5983

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚನ್ನರಾಜ ಬಸವರಾಜ ಹಟ್ಟಿಹೊಳಿ ಇವರು ನಿಯಮ 72ರಡಿ ಮಂಡಿಸಿರುವ ಗಮನಸೆಳೆಯುವ ಸೂಚನೆ ಸಂಖ್ಯೆ:84ಕ್ಕೆ ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಉತ್ತರ:

**ಪ್ರಶ್ನೆ:**

ಬೆಳಗಾವಿ ನಗರದಲ್ಲಿರುವ ಜಿಲ್ಲಾ ಕೇಂದ್ರ ಬಸ್ ನಿಲ್ದಾಣದ ಕಾಮಗಾರಿಯು ಕುಂಠಿತಗೊಂಡಿದ್ದು, ಇದುವರೆವಿಗೂ ಪೂರ್ಣಗೊಳ್ಳದಿರುವುದರಿಂದ ಸಾರ್ವಜನಿಕರ ಅನುಕೂಲಕ್ಕೆ ಬೇಕಾಗಿರುವಷ್ಟು ಬಸ್ಸುಗಳ ಕೊರತೆಯಿಂದಾಗಿ ಸಾರ್ವಜನಿಕರ ಪ್ರಯಾಣಕ್ಕೆ ತುಂಬಾ ಅನಾನುಕೂಲವಾಗುತ್ತಿದ್ದು, ಕೇಂದ್ರ ಬಸ್ ನಿಲ್ದಾಣದ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ವಿಷಯದ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನವನ್ನು ಸೆಳೆಯ ಬಯಸುತ್ತೇನೆ

**ಉತ್ತರ:**

ಕಾಮಗಾರಿಯನ್ನು ಹಾಲಿ ಬಸ್ ನಿಲ್ದಾಣದ ಜಾಗದಲ್ಲಿಯೇ ನಿರ್ಮಿಸಲಾಗುತ್ತಿದ್ದರಿಂದ ಹಂತ ಹಂತವಾಗಿ ಬಸ್ ನಿಲ್ದಾಣದ ಕಾರ್ಯಾಚರಣೆಗೆ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡು ನಿರ್ಮಿಸಬೇಕಾಗಿದ್ದರಿಂದ ವಿಳಂಬಕ್ಕೆ ಪ್ರಮುಖ ಕಾರಣವಾಗಿರುತ್ತದೆ. ಅಲ್ಲದೇ ನಗರ ಸಾರಿಗೆ ಬಸ್ ನಿಲ್ದಾಣವನ್ನು ಸ್ಮಾರ್ಟ ಸಿಟಿ ಯೋಜನೆಯಡಿಯಲ್ಲಿ ಹೊಸದಾಗಿ ನಿರ್ಮಿಸಲಾಗುತ್ತಿದ್ದು, ಸದರಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ನಡೆಸುತ್ತಿದ್ದ ಬಸ್‌ಗಳನ್ನೂ ಸಹ ಕೇಂದ್ರ ಬಸ್ ನಿಲ್ದಾಣದ ಜಾಗದಲ್ಲಿಯೇ ಅವಕಾಶ ಮಾಡಿಕೊಟ್ಟಿರುವುದರಿಂದ ಗುತ್ತಿಗೆದಾರರಿಗೆ ಕಾಮಗಾರಿಯನ್ನು ನಿರ್ವಹಿಸಲು ತೊಂದರೆಯಾಗಿರುತ್ತದೆ. ಮುಂದುವರೆದು ಗುತ್ತಿಗೆದಾರರಿಂದ ಆದ ವಿಳಂಬಕ್ಕೆ ಈಗಾಗಲೇ ಹಲವಾರು ನೋಟಿಸ್ ನೀಡಿ ಕಾಮಗಾರಿಯನ್ನು ಬೇಗನೆ ಪೂರ್ಣಗೊಳಿಸಲು ಒತ್ತಾಯಿಸಲಾಗುತ್ತಿದೆ.

ಬಸ್ ನಿಲ್ದಾಣದ ಪ್ರಮುಖ ಭಾಗ ಈಗಾಗಲೇ ಪ್ರತಿಶತ 85ರಷ್ಟು ಪೂರ್ಣಗೊಳಿಸಲಾಗಿದ್ದು, ಭಾಗಶಃ ಕಟ್ಟಡವನ್ನು ಸಾರ್ವಜನಿಕ ಪ್ರಯಾಣಿಕರಿಗೆ ಬಿಟ್ಟುಕೊಡಲಾಗಿದೆ. ಬಾಕಿ ಆವರಣಕ್ಕೆ ಕಾಂಕ್ರೀಟ್ ಅಳವಡಿಸುವ ಕೆಲಸ ಪ್ರಗತಿಯಲ್ಲಿದ್ದು, ಮಾರ್ಚ್-2023ರೊಳಗೆ ಬಸ್ ನಿಲ್ದಾಣವನ್ನು ಎಲ್ಲಾ ರೀತಿಯಿಂದ ಪೂರ್ಣಗೊಳಿಸಿ ಸಂಪೂರ್ಣವಾಗಿ ಸಾರ್ವಜನಿಕ ಪ್ರಯಾಣಿಕರ ಉಪಯೋಗಕ್ಕೆ ಬಿಟ್ಟುಕೊಡಲಾಗುವುದು.

ಅಲ್ಲದೇ, ಸಾರ್ವಜನಿಕ ಪ್ರಯಾಣಿಕರಿಗೆ ಕಾಮಗಾರಿಯಿಂದ ಯಾವುದೇ ತೊಂದರೆಯಾಗದಂತೆ ಪ್ರತಿದಿನ 1292 ಗ್ರಾಮೀಣ ಮತ್ತು ದೂರದ ಮಾರ್ಗಗಳಿಗೆ ಹಾಗೂ ನಗರ ವ್ಯಾಪ್ತಿಯಲ್ಲಿ 1464 ಸರತಿ ಸೇರಿದಂತೆ ಒಟ್ಟು 2756 ಸರತಿಗಳನ್ನು ಕಾರ್ಯಾಚರಿಸಿ ಸಾರಿಗೆ ಸೌಲಭ್ಯ ಕಲ್ಪಿಸಲಾಗುತ್ತಿದೆ.

ಸಂಖ್ಯೆ: ಟಿಡಿ 207 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು.



Generated from eOffice by B SREERAMULU, TOHMINISTER, TRANSPORT MINISTER

C-84